# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## ಅಧಿಸೂಚನೆ

**ಸಂಖ್ಯೆ: ಕವಿಪ್ರನಿನಿ/ಬಿ16/40342/2016-17** **ದಿನಾಂಕ: 16.09.2016**

ದಿನಾಂಕ: 05.08.2016 ರ ಉದ್ಯೋಗ ಪ್ರಕಟಣೆಯಲ್ಲಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಿರಿಯ ಮಾರ್ಗದಾಳು (JLM) ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ರಾಜ್ಯದ ವಿದ್ಯಾಸಂಸ್ಥೆಗಳಿಂದ ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ 'ಆನ್-ಲೈನ್' (ON-LINE) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು ಹಾಗೂ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು **ಯಾವುದಾದರೂ ಒಂದು ಕಂಪನಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ** ಎಂದು ತಿಳಿಸಲಾಗಿತ್ತು.

ಆದಾಗ್ಯೂ, ಅಭ್ಯರ್ಥಿಗಳು ಉದ್ಯೋಗ ಪ್ರಕಟಣೆಯಲ್ಲಿ ತಿಳಿಸಲಾಗಿದ್ದ ಸೂಚನೆಗಳನ್ನು ಪಾಲಿಸದೆ ಒಂದಕ್ಕಿಂತ ಹೆಚ್ಚು ಕಂಪನಿಗಳಿಗೆ ಅರ್ಜಿಗಳನ್ನು ಸಲ್ಲಿಸಿರುವುದು ಕಂಡುಬಂದಿರುತ್ತದೆ. ಆದ್ದರಿಂದ **ಒಂದಕ್ಕಿಂತ ಹೆಚ್ಚು ಕಂಪನಿಗಳಿಗೆ ಅರ್ಜಿಗಳನ್ನು ಸಲ್ಲಿಸಿರುವ ಅಭ್ಯರ್ಥಿಗಳು** ತಾವು ಇಚ್ಛಿಸುವ **ಯಾವುದಾದರೂ ಒಂದು ಕಂಪನಿಯನ್ನು ಮಾತ್ರ ಆಯ್ಕೆ ಮಾಡಿಕೊಳ್ಳಲು ಅವಕಾಶವನ್ನು ಕಲ್ಪಿಸಲು ಉದ್ದೇಶಿಸಲಾಗಿರುತ್ತದೆ.** ಆದ್ದರಿಂದ ಅಭ್ಯರ್ಥಿಗಳು, ದಿನಾಂಕ: **17.09.2016 ರಿಂದ 22.09.2016 ರವರೆಗೆ** ಈ ಕೆಳಕಂಡ ಯಾವುದಾದರೂ ವೆಬ್‌ಸೈಟ್‌ನಲ್ಲಿ, ಅರ್ಜಿ ಸಂಖ್ಯೆ ಹಾಗೂ ಜನ್ಮ ದಿನಾಂಕದೊಂದಿಗೆ ಲಾಗ್-ಆನ್ ಮಾಡಿ ಈಗಾಗಲೇ ಸಲ್ಲಿಸಿರುವ ಅರ್ಜಿಗಳಲ್ಲಿ **ತಾವು ಇಚ್ಛಿಸುವ ಯಾವುದಾದರೂ ಒಂದು ಕಂಪನಿಗೆ ಸಲ್ಲಿಸಿರುವ ಅರ್ಜಿಯನ್ನು ಮಾತ್ರ ಆಯ್ಕೆ ಮಾಡಿಕೊಳ್ಳಲು ಸೂಚಿಸಲಾಗಿದೆ.** ಒಂದು ವೇಳೆ ಅಭ್ಯರ್ಥಿಗಳು ಮೇಲೆ ತಿಳಿಸಿರುವ ದಿನಾಂಕದೊಳಗೆ ಪರಿಗಣಿಸಬೇಕಾದ ಅರ್ಜಿಯನ್ನು ಆಯ್ಕೆ ಮಾಡಿಕೊಳ್ಳದಿದ್ದ ಪಕ್ಷದಲ್ಲಿ, **ಅಭ್ಯರ್ಥಿಗಳು ಮೊದಲನೆಯದಾಗಿ (First) ಯಾವ ಕಂಪನಿಗೆ ಅರ್ಜಿಯನ್ನು ಸಲ್ಲಿಸಿರುತ್ತಾರೋ, ಆ ಅರ್ಜಿಯನ್ನು ಅರ್ಹವಾಗಿದ್ದಲ್ಲಿ ಮಾತ್ರ ನೇಮಕಾತಿಗಾಗಿ ಪರಿಗಣಿಸಲಾಗುವುದು. ಉಳಿದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು.**

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಕಂಪನಿಯ ಈ ಕೆಳಕಂಡ ಸಹಾಯವಾಣಿಯನ್ನು ಸಂಪರ್ಕಿಸಬಹುದಾಗಿದೆ.

| | | | |
|---|---|---|---|
| ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ | : | 080-22211527<br>EXT: 3872, 3789 | www.kptcl.com |
| ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ | : | 080-22085061 | www.bescom.org |
| ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ | : | 0836-2223867 | www.hescom.co.in |
| ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ | : | 0821-2343384 | www.cescmysore.org |

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ನಿಗಮ ಕಾರ್ಯಾಲಯ, ಕವಿಪ್ರನಿನಿ,
ಕಾವೇರಿ ಭವನ, ಬೆಂಗಳೂರು.